**3ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ**
**ಇವರ ನ್ಯಾಯಾಲಯದಲ್ಲಿ, ಬೆಳಗಾವಿ.**

ಸ್ಪೆಷಲ್ ಕೇಸ ನಂಃ 534/2019
ಪಿಡಬ್ಲು :3 ಸಿಡಬ್ಲು :5

| | |
|---|---|
| ಸಾಕ್ಷಿಯ ಹೆಸರು | : ಶ್ರೀ.ಸಂಜು ಕಿಲಾರಿ |
| ತಂದೆಯ ಹೆಸರು | : ಶ್ರೀ. ರಾಮಾ |
| ವಯಸ್ಸು | : 43 ವರ್ಷ |
| ಉದ್ಯೋಗ | : ವಕ್ಕಲುತನ |
| ವಾಸ್ತವ್ಯ | : ಖೈರಖೋಡಿ, ತಾಲೂಕುಃ ರಾಯಬಾಗ |
| ದಿನಾಂಕ | : 09-07-2026 ರಂದು ಸಾಕ್ಷೀದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು. |

**ಮುಖ್ಯ ವಿಚಾರಣೆ : ವಿಶೇಷ ಸರ್ಕಾರಿ ಅಭಿಯೋಜಕರಿಂದ**

ಚಾಸಾಃ 4 ಸಿದ್ದು ಹವಾಲ್ದಾರ ಗೊತ್ತಿರುತ್ತಾರೆ. 2019 ರಲ್ಲಿ ಪೋಲಿಸರು ನನ್ನನ್ನು ಪೋಲಿಸ ಠಾಣೆಗೆ ಸಹಿ ಮಾಡಲು ಕರೆಸಿದ್ದರು. ಪೋಲಿಸರು ನನಗೆ ಏನು ಹೇಳಿರುವುದಿಲ್ಲ ಸಹಿ ಮಾಡಿಸಿಕೊಡು ಕಳುಹಿಸಿರುತ್ತಾರೆ. ಪೋಲಿಸ ಠಾಣೆಯಲ್ಲಿ ಯಾವುದೇ ಬಟ್ಟೆಗಳನ್ನು ನನಗೆ ತೋರಿಸಿರುವುದಿಲ್ಲ. ನನ್ನ ಸಹಿ ನೋಡಿದರೆ ಗುರುತಿಸುತ್ತೇನೆ. ಬಟ್ಟೆ ಜಪ್ತು ಪಂಚನಾಮೆ ಮೇಲೆ ಸಾಕ್ಷಿ ತಮ್ಮ ಸಹಿಯನ್ನು ಗುರುತಿಸಿರುತ್ತಾರೆ. ಪಂಚನಾಮೆಯನ್ನು ನಿಪಿ-4 ಎಂದು, ಅದರ ಮೇಲಿರುವ ಸಾಕ್ಷಿಯ ಸಹಿಯನ್ನು ನಿಪಿ-4 [ಎ] ಎಂದು ಗುರುತಿಸಲಾಯಿತು. ನಿಪಿ-4 ರಲ್ಲಿ ಏನು ಬರೆಯಲಾಗಿದೆ ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದಾರೆ, ಸಾಕ್ಷಿಯ ಸಾಕ್ಷ್ಯವನ್ನು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು).**

**ಪಾಟೀ ಸವಾಲುಃ ವಿಶೇಷ ಸರ್ಕಾರಿ ಅಭಿಯೋಜಕರಿಂದ**

2. ನಾನು ಪೋಲಿಸ ಠಾಣೆಗೆ ಹೋದಾಗ ಚಾಸಾ-8 ಮುತ್ತಪ್ಪ ಭಜಂತ್ರಿ ಅವರು ಠಾಣೆಯಲ್ಲಿ ಹಾಜರಿದ್ದು ದಿನಾಂಕಃ 14-02-2019 ರಂದು ಘಟನೆ ನಡೆಯಿತು ಎನ್ನಲಾದ ಸಮಯದಲ್ಲಿ ರಕ್ತ ಅಂಟಿದ ಬಟ್ಟೆಯಾದ ಒಂದು ಬಿಳಿ ಬನಿಯಾನನ್ನು ಪೋಲಿಸರಿಗೆ ನೀಡಿದ್ದು, ಪೋಲಿಸರು ನಿಪಿ-4 ರಂತೆ ಪಂಚನಾಮೆ ಮಾಡಿ ನಿಪಿ-4(ಎ) ಪ್ರಕಾರ ನನ್ನ ಸಹಿ ಮಾಡಿಸಿಕೊಂಡರು ಎನ್ನುವುದು ಸರಿಯಲ್ಲ. ಈ ಎಲ್ಲ ವಿಚಾರಗಳು ನನಗೆ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎನ್ನುವುದು ಸರಿಯಲ್ಲ.

**ಪಾಟೀ ಸವಾಲು:ಶ್ರೀ.ಬಿ.ಜೆ.ಜಿ ವಕೀಲರಿಂದ ಆರೋಪಿತರ ಪರ**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳುತ್ತಾರೆ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮುಖಾಂತರ ಪಡೆದುಕೊಳ್ಳಲಾಯಿತು).

ಓ.ಹೇ.ಕೇ.ಸರಿ ಅದೆ.

(ಸವಿತಾ ಕುಮಾರಿ ಎನ್)
3ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಳಗಾವಿ.